ವಿಷಯ : ಐ.ಟಿ.ಐ ಕಾಲೇಜು

8 (249) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) :– ಮಾನ್ಯ ಕಾರ್ಮಿಕ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಮಾಗಡಿ ಪಟ್ಟಣದಲ್ಲಿರುವ ಐ.ಟಿ.ಐ. ಕಾಲೇಜಿಗೆ ಸ್ವಂತ ಕಟ್ಟಡವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಐ.ಟಿ.ಐ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು;

(ಇ) ಐ.ಟಿ.ಐ ಕಾಲೇಜು ಕಟ್ಟಡ ನಿರ್ಮಾಣಕ್ಕೆ ಸರ್ಕಾರವು ಈಗಾಗಲೇ ಬಿಡುಗಡೆ ಮಾಡಿರುವ ಹಣವೆಷ್ಟು;

(ಈ) ಯಾವ ಕಾಲಮಿತಿಯಲ್ಲಿ ಸರ್ಕಾರಿ ಐ.ಟಿ.ಐ ಕಾಲೇಜಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಲಾಗುವುದು ?

ಶ್ರೀ ಬಿ.ಎನ್. ಬಚ್ಚೇಗೌಡ (ಮಾನ್ಯ ಕಾರ್ಮಿಕ ಸಚಿವರು)

(ಅ) ಹೌದು ಗಮನಕ್ಕೆ ಬಂದಿದೆ.

(ಆ) ಸ್ವಂತ ಕಟ್ಟಡ ಹೊಂದಲು ಅವಶ್ಯಕವಾಗಿರುವ ಜಮೀನನ್ನು ಪಡೆಯಲು ಉದ್ಯೋಗ ಮತ್ತು ತರಬೇತಿ ಇಲಾಖೆಯು ಕಂದಾಯ ಇಲಾಖೆಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಪ್ರಸ್ತುತ ಕಸಬಾ ಹೋಬಳಿ, ವಡ್ಡರ ಪಾಳ್ಯ ಗ್ರಾಮದ ಸರ್ವೆ ಸಂಖ್ಯೆ–38 ರಲ್ಲಿ ಒಟ್ಟು 3 ಎಕರೆ 1 ಗುಂಟೆ ಜಮೀನನ್ನು ಗುರುತಿಸಿದ್ದು, ಅದು ಕೆರೆ ಪ್ರದೇಶವಾದ ಕಾರಣ ಅದನ್ನು ಹಂಚಿಕೆ ಮಾಡುವ ಬಗ್ಗೆ ಆದೇಶ ಕೋರಿ ರಾಮನಗರ ಜಿಲ್ಲಾಧಿಕಾರಿಗಳ ಕಛೇರಿಯಿಂದ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಸೂಕ್ತ ಜಮೀನು ಲಭ್ಯವಾದ ನಂತರ ಸ್ವಂತ ಕಟ್ಟಡವನ್ನು ನಿರ್ಮಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

(ಇ) ಇದುವರೆಗೆ ಹಣ ಬಿಡುಗಡೆ ಮಾಡಿರುವುದಿಲ್ಲ.

(ಈ) ಸೂಕ್ತ ಜಮೀನು ಮತ್ತು ಅಗತ್ಯ ಅನುದಾನದ ಲಭ್ಯತೆಯನ್ನಾಧರಿಸಿ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು.